ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ**
(ಕರ್ನಾಟಕ ಸರ್ಕಾರದ ಅಧೀನಕೊಳಪಟ್ಟಿದೆ)
ಕೌಶಲ್ಯ ಭವನ, 3ನೇ ಮಹಡಿ, ಡೈರಿ ಸರ್ಕಲ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029
ದೂರವಾಣಿ ಸಂಖ್ಯೆ:080-2952 2222 ಇ-ಮೇಲ್:skilldev.2017@gmail.com

ಸಂಖ್ಯೆ: ಕೆ.ಎಸ್.ಡಿ.ಸಿ./ವಿಕೌ/ಇಂಡಿಯಾಸ್ಕಿಲ್ಸ್-2026/ವಿವ-01/2026-27 ದಿನಾಂಕ: 12/10/2026

## ಸಭಾ ಸೂಚನಾ ಪತ್ರ

2026-27 ನೇ ಸಾಲಿನ IndiaSkills Competition-2026 ರ ಸ್ಪರ್ಧೆಯನ್ನು ಆಯೋಜಿಸಲಾಗುತ್ತಿದ್ದು, ಸದರಿ ಸ್ಪರ್ಧೆಗೆ ಸಂಬಂಧಿಸಿದಂತೆ, ವಿಶ್ವವಿದ್ಯಾಲಯದ ಅಧೀನದ ಕಾಲೇಜುಗಳ ಹಾಗೂ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಂಡು ಭಾಗವಹಿಸುವಂತೆ ವ್ಯಾಪಕ ಪ್ರಚಾರ ಕೈಗೊಳ್ಳುವ ಕುರಿತು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಶ್ವ ವಿದ್ಯಾಲಯಗಳು, ಕಾಲೇಜುಗಳು ಹಾಗೂ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧೆಯಲ್ಲಿ ನೋಂದಾಯಿಸಿಕೊಂಡು ಭಾಗವಹಿಸುವಂತೆ, ಪ್ರೇರೇಪಿಸಲು ಅರಿವು ಮೂಡಿಸಿ, ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಪ್ರೋತ್ಸಾಹಿಸಲು ತುರ್ತು ಅಗತ್ಯ ಕ್ರಮವಹಿಸಲು ಈಗಾಗಲೇ ಸುತ್ತೋಲೆಯಡಿ ಸೂಚಿಸಲಾಗಿರುತ್ತದೆ. ಅದರಂತೆ, ನೋಂದಣಿ ದಿನಾಂಕವನ್ನು **19.10.2026** ರವರೆಗೂ ನೋಂದಣಿ ಪ್ರಕ್ರಿಯೆಯನ್ನು ವಿಸ್ತರಿಸಲಾಗಿದ್ದು, ಈ ಕುರಿತಂತೆ ಚರ್ಚಿಸಲು ದಿನಾಂಕ: **12.10.2026** ರಂದು ಸಂಜೆ **5:30** ಗಂಟೆಗೆ ವಿಡಿಯೋ ಕಾನ್ಫೇರೆನ್ಸ್ ಲಿಂಕ್ : https://meet.google.com/kjs-tjxh-zdo ಮುಖೇನ ಸಭೆಯನ್ನು ಆಯೋಜಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ತಾವು ತಮ್ಮ ಜಿಲ್ಲೆಗಳಲ್ಲಿರುವ ವಿಶ್ವವಿದ್ಯಾಲಯಗಳ ಮಾನ್ಯ ಉಪಕುಲಪತಿಗಳಿಗೆ ಹಾಗೂ ರಿಜಿಸ್ಟರ್ ರವರುಗಳಿಗೆ ಸದರಿ ಸಭೆಗೆ ಭಾಗವಹಿಸುವಂತೆ ಕೋರಲು ಈ ಮೂಲಕ ಸೂಚಿಸಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ

ರವರಿಗೆ,
ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು,
ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿ,
________________ ಜಿಲ್ಲೆ (31 ಜಿಲ್ಲೆಗಳು)

ಪ್ರತಿಯನ್ನು :
ಎಲ್ಲಾ ಜಿಲ್ಲೆಗಳ ವಿಶ್ವವಿದ್ಯಾಲಯಗಳ ಮಾನ್ಯ ಉಪಕುಲಪತಿಗಳು ಹಾಗೂ ರಿಜಿಸ್ಟರ್‌ಗಳ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ ಸಲ್ಲಿಸಲಾಗಿದೆ.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ
**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ**
(ಕರ್ನಾಟಕ ಸರ್ಕಾರದ ಅಧೀನಕೊಳಪಟ್ಟಿದೆ)
ಕೌಶಲ್ಯ ಭವನ, 3ನೇ ಮಹಡಿ, ಡೈರಿ ಸರ್ಕಲ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029
ದೂರವಾಣಿ ಸಂಖ್ಯೆ:080-2952 2222 ಇ-ಮೇಲ್:skilldev.2017@gmail.com

ಸಂಖ್ಯೆ: ಕೆ.ಎಸ್.ಡಿ.ಸಿ./ವಿಕೌ/ಇಂಡಿಯಾಸ್ಕಿಲ್ಸ್-2026/ವಿವ-01/2026-27 ದಿನಾಂಕ: 12/10/2026

## ಸುತ್ತೋಲೆ

ವಿಷಯ: 2026-27ನೇ ಸಾಲಿನ IndiaSkills Competition-2026ರ ಸ್ಪರ್ಧೆಯಲ್ಲಿ ವಿಶ್ವವಿದ್ಯಾಲಯದ ಅಧೀನದ ಕಾಲೇಜುಗಳ ಹಾಗೂ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಂಡು ಭಾಗವಹಿಸುವಂತೆ ವ್ಯಾಪಕ ಪ್ರಚಾರ ಕೈಗೊಳ್ಳುವ ಕುರಿತು.

•-•-•-•-•

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರದ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಮಂತ್ರಾಲಯವು ದೇಶದ ಪ್ರತಿಭಾವಂತ ಯುವಜನರನ್ನು ಗುರುತಿಸಿ, ಅವರ ವೃತ್ತಿಪರ ಕೌಶಲ್ಯಗಳನ್ನು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರದರ್ಶಿಸಲು ಉತ್ತೇಜಿಸುವ ಉದ್ದೇಶದಿಂದ ಇಂಡಿಯಾ ಸ್ಕಿಲ್ಸ್ ಸ್ಪರ್ಧೆ 2026-27 ಅನ್ನು ಆಯೋಜಿಸಿದೆ. ಇದರ ಅಂಗವಾಗಿ, ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ 2026-27ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕೌಶಲ್ಯ ಒಲಂಪಿಕ್ಸ್ (IndiaSkills Competition-2026) ಸ್ಪರ್ಧಾ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ.

ತಮ್ಮೆಲ್ಲರ ಸಹಕಾರದಿಂದ 2025-26 ನೇ ಸಾಲಿಗೆ ಸಂಬಂಧಿಸಿದಂತೆ ಚೀನಾ ದೇಶದ ಶಾಂಘೈನಲ್ಲಿ ಸೆಪ್ಟೆಂಬರ್-2026ರಲ್ಲಿ ಆಯೋಜಿಸಲಾಗಿರುವ ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ರಾಜ್ಯದಿಂದ 16 ಅಭ್ಯರ್ಥಿಗಳು ಭಾಗವಹಿಸಿದ್ದು, ಒಂದು ಬೆಳ್ಳಿ ಪದಕ ಹಾಗೂ 8 ಶ್ರೇಷ್ಠತಾ ಪದಕಗಳನ್ನು ಪಡೆದಿರುವುದು ರಾಜ್ಯದ ಗೌರವಯುತ ಹೆಗ್ಗಳಿಕೆಗೆ ಕಾರಣವಾಗಿರುತ್ತದೆ.

ಮುಂದುವರೆದು, 2028ನೇ ಸಾಲಿಗೆ ವಿಶ್ವ ಕೌಶಲ್ಯ ಸ್ಪರ್ಧೆಯು ಜಪಾನ್ ದೇಶದ ಐಚಿಯಲ್ಲಿ ನಡೆಯಲಿದ್ದು, ರಾಜ್ಯದ ಪ್ರತಿಭಾವಂತ ಯುವಜನರನ್ನು ಗುರುತಿಸಿ, ಅವರಿಗೆ ಸೂಕ್ತ ತರಬೇತಿ, ಮಾರ್ಗದರ್ಶನ ಹಾಗೂ ಕಾರ್ಯಚಟುವಟಿಕೆಗಳಿಗೆ ಚಾಲನೆ ನೀಡಲು ಅಗತ್ಯವಿರುವ ಪೂರ್ವಸಿದ್ಧತೆ ಕೈಗೊಳ್ಳಬೇಕಾಗಿರುತ್ತದೆ. 2026-27ನೇ ಸಾಲಿನಲ್ಲಿ "ಕರ್ನಾಟಕ ರಾಜ್ಯ ಕೌಶಲ್ಯ ಒಲಂಪಿಕ್ಸ್ ಕಾರ್ಯಕ್ರಮ" ವನ್ನು ಜಿಲ್ಲಾ, ವಲಯ ಹಾಗೂ ರಾಜ್ಯ ಮಟ್ಟಗಳಲ್ಲಿ ಕೈಗೊಳ್ಳಲು ಯೋಜಿಸಲಾಗಿದೆ. ಈ ಸ್ಪರ್ಧೆಗಾಗಿ ಅಭ್ಯರ್ಥಿಗಳು ಸ್ಕಿಲ್ ಇಂಡಿಯಾ ಡಿಜಿಟಲ್ ಹಬ್ ಪೋರ್ಟಲ್ ಮೂಲಕ ನೋಂದಾಯಿಸಕೊಳ್ಳಬೇಕಾಗಿದ್ದು, ನೋಂದಣಿ ಲಿಂಕ್: www.skillindiadigital.gov.in ಆಗಿರುತ್ತದೆ.

ಆದುದರಿಂದ, ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಶ್ವ ವಿದ್ಯಾಲಯಗಳು, ಕಾಲೇಜುಗಳು ಹಾಗೂ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧೆಯಲ್ಲಿ ನೋಂದಾಯಿಸಿಕೊಂಡು ಭಾಗವಹಿಸುವಂತೆ, ಪ್ರೇರೇಪಿಸಲು ಅರಿವು ಮೂಡಿಸಿ, ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಪ್ರೋತ್ಸಾಹಿಸಲು ತುರ್ತು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ. ಅದರಂತೆ, ನೋಂದಣಿ **ದಿನಾಂಕವನ್ನು 19.10.2026 ರವರೆಗೂ ವಿಸ್ತರಿಸಲಾಗಿದ್ದು, ದಿನಾಂಕ: 12.10.2026 ರಂದು ಸಂಜೆ 5:30 ಗಂಟೆಗೆ ವಿಡಿಯೋ ಕಾನ್ಫೆರೆನ್ಸ್ ಲಿಂಕ್ :** https://meet.google.com/kjs-tjxh-zdo **ಮುಖೇನ ಸಭೆಯನ್ನು ಆಯೋಜಿಸಲಾಗಿದ್ದು, ತಾವು ತಮ್ಮ ಜಿಲ್ಲೆಗಳಲ್ಲಿರುವ ವಿಶ್ವವಿದ್ಯಾಲಯಗಳ ಮಾನ್ಯ ಉಪಕುಲಪತಿಗಳಿಗೆ ಹಾಗೂ ರಿಜಿಸ್ಟರರ್ ರವರುಗಳಿಗೆ ಸದರಿ ಸಭೆಗೆ ಭಾಗವಹಿಸುವಂತೆ ಸೂಕ್ತ ಕ್ರಮವಹಿಸಲು ಈ ಮೂಲಕ ಸೂಚಿಸಲಾಗಿದೆ.**

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ

ರವರಿಗೆ,
ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು,
ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿ,
_________________ ಜಿಲ್ಲೆ (31 ಜಿಲ್ಲೆಗಳು)

ಪ್ರತಿಯನ್ನು :
ಎಲ್ಲಾ ಜಿಲ್ಲೆಗಳ ವಿಶ್ವವಿದ್ಯಾಲಯಗಳ ಮಾನ್ಯ ಉಪಕುಲಪತಿಗಳು ಹಾಗೂ ರಿಜಿಸ್ಟರರ್‌ಗಳ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ ಸಲ್ಲಿಸಲಾಗಿದೆ.